# ಕರ್ನಾಟಕ ವಿಧಾನ ಪರಿಷತ್ತು

## ಲಘು ಪ್ರಕಟಣೆ ಭಾಗ – 2

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

**ಬುಧವಾರ, ದಿನಾಂಕ:22ನೇ ಮೇ, 2024**

**ಸಂಖ್ಯೆ: 23**

ಲೋಕಸಭೆಯ ಸಾರ್ವತ್ರಿಕ ಚುನಾವಣೆಯ ಪ್ರಯುಕ್ತ ದಿನಾಂಕ: 22.03.2024 ರಿಂದ ಚುನಾವಣಾ ಪ್ರಕ್ರಿಯೆಯು ಮುಕ್ತಾಯಗೊಳ್ಳುವವರೆಗೂ ವಿಧಾನ ಪರಿಷತ್ತಿನ ವಿವಿಧ ಸ್ಥಾಯಿ ಸಮಿತಿಗಳ ಸಭೆಗಳನ್ನು ನಡೆಸದಂತೆ ಲಘು ಪ್ರಕಟಣೆ ಸಂಖ್ಯೆ.19ರಲ್ಲಿ ತಿಳಿಸಲಾಗಿತ್ತು. ಆದರೆ, ಕರ್ನಾಟಕದಲ್ಲಿ ಈಗಾಗಲೇ ಎರಡು ಹಂತಗಳ ಚುನಾವಣೆಯು ಮುಕ್ತಾಯಗೊಂಡಿರುವುದರಿಂದ ವಿಧಾನ ಮಂಡಲದ/ವಿಧಾನಸಭೆಯ ವಿವಿಧ ಸ್ಥಾಯಿ ಸಮಿತಿಗಳ ಸಭೆಗಳನ್ನು ನಡೆಸಲು ಸನ್ಮಾನ್ಯ ವಿಧಾನ ಸಭಾಧ್ಯಕ್ಷರು ಅನುಮತಿಸಿರುತ್ತಾರೆ. ಉಭಯ ಸಚಿವಾಲಯಗಳಲ್ಲಿ ಏಕರೂಪತೆಯನ್ನು ಕಾಯ್ದುಕೊಳ್ಳಬೇಕಾಗಿರುವುದರಿಂದ, ವಿಧಾನ ಮಂಡಲದ/ವಿಧಾನ ಪರಿಷತ್ತಿನ ವಿವಿಧ ಸ್ಥಾಯಿ ಸಮಿತಿಗಳ ಸಭೆಗಳನ್ನು ನಡೆಸಲು ಸನ್ಮಾನ್ಯ ಸಭಾಪತಿಯವರು ಅನುಮತಿ ನೀಡಿರುತ್ತಾರೆಂದು ಈ ಮೂಲಕ ಎಲ್ಲಾ ಮಾನ್ಯ ಶಾಸಕರುಗಳಿಗೆ ತಿಳಿಯಪಡಿಸಲಾಗಿದೆ.

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.

**ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಶಾಸಕರುಗಳ ಮಾಹಿತಿಗಾಗಿ.**

**www.kla.kar.nic.in/council.htm**